ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳಿಗೆ ಆಹಾರ ಧಾನ್ಯಗಳ ಬಗ್ಗೆ

ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

711 (763) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳಿಗೆ ಯಾವ ಯಾವ ಆಹಾರ ಧಾನ್ಯಗಳನ್ನು ಪೂರೈಸಲಾಗುತ್ತಿದೆ ;

(ಆ) ಬೀದರ್ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಆಹಾರ ಪೂರೈಸಲಾಗುತ್ತಿದೆ ಎನ್ನುವ ದೂರುಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಉತ್ತಮ ಗುಣಮಟ್ಟದ ಆಹಾರ ಸರಬರಾಜು ಮಾಡಲು ಕೈಗೊಂಡಿರುವ ಕ್ರಮಗಳೇನು?